ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಕನ್ನಡಿಗರಿಗೆ ಉದ್ಯೋಗ ಒದಗಿಸುವ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

416 (410) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಖಾಸಗಿ ಸಂಸ್ಥೆ/ಕಾರ್ಖಾನೆ/ಇನ್ನಿತರ ಹಲವಾರು ಸಂಸ್ಥೆಗಳಲ್ಲಿ ಮತ್ತು ಸರ್ಕಾರಿ ಉದ್ಯೋಗಗಳು ಹೊರ ರಾಜ್ಯದವರ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಮತ್ತು ಕರ್ನಾಟಕದವರಿಗೆ ಖಾಸಗಿ/ಸರ್ಕಾರಿ ಉದ್ಯೋಗಗಳನ್ನು ಮೀಸಲಿರಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ನಿರ್ಧಾರಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಹೊರರಾಜ್ಯಗಳಾದ ಆಂಧ್ರ ಪ್ರದೇಶ, ತಮಿಳುನಾಡು ಇನ್ನಿತರೆ ರಾಜ್ಯಗಳಲ್ಲಿ ಅಲ್ಲಿನ ರಾಜ್ಯದ ಸ್ಥಳೀಕರಿಗೆ ಖಾಸಗಿ ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆ ರಾಜ್ಯದ ಮೀಸಲಾತಿ ಬಗ್ಗೆ ಮಾಹಿತಿ ಒದಗಿಸುವುದು ;

(ಈ) ಕರ್ನಾಟಕ ಸ್ಥಳೀಕರಿಗೆ ಸರ್ಕಾರಿ ಉದ್ಯೋಗಗಳಲ್ಲಿ ಶೇಕಡಾ 80 ರಷ್ಟು ಮತ್ತು ಕೇಂದ್ರ ಸರ್ಕಾರದ ಮತ್ತು ಖಾಸಗಿ ಕಂಪನಿಗಳು/ ಬಹು ರಾಷ್ಟ್ರೀಯ ಕಂಪನಿಗಳಲ್ಲಿ ಶೇಕಡಾ 65 ರಷ್ಟು ಕರ್ನಾಟಕದಲ್ಲಿ ಕನಿಷ್ಠ ಪಕ್ಷ 20 ವರ್ಷಗಳಿಂದ ವಾಸವಿರುವವರಿಗೆ /ಕನ್ನಡ ಭಾಷೆ ಓದಲು ಬರೆಯಲು ಬರುವವರಿಗೆ ಎಂದು ಷರತ್ತು ವಿಧಿಸಿ, ಮೀಸಲಾತಿಯನ್ನು ಕಲ್ಪಿಸಲು ಕಾನೂನು ರೂಪಿಸಲು ಸರ್ಕಾರಕ್ಕಿರುವ ತೊಂದರೆ ಏನು ; (ವಿವರ ನೀಡುವುದು)

(ಉ) ಈ ಕಾನೂನನ್ನು ಕೂಡಲೇ ರೂಪಿಸಲಾಗುವುದೇ ? (ವಿವರ ನೀಡುವುದು)